# ಪತ್ರಿಕಾ ಪ್ರಕಟಣೆ

ದಿನಾಂಕ: 10-09-2021 ರಿಂದ ಮಂಗಳೂರು ನಗರ ವ್ಯಾಪ್ತಿಯಲ್ಲಿ ಒಟ್ಟು 157 ಸಾರ್ವಜನಿಕ ಸ್ಥಳದಲ್ಲಿ ಗಣೇಶ ಪ್ರತಿಷ್ಠಾಪನೆ ಮತ್ತು ಆಚರಣೆ ಮಾಡುತ್ತಿದ್ದು, ಸರಕಾರದ ಆದೇಶದಂತೆ ಎಲ್ಲಾ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಲಾಗುವುದು. ಯಾವುದೇ ಮೆರವಣಿಗೆ, ಸಂಗೀತ ಸಾಂಸ್ಕೃತಿಕ, ಮನರಂಜನಾ ಕಾರ್ಯಕ್ರಮಕ್ಕೆ ಅವಕಾಶ ಇರುವುದಿಲ್ಲ. ಆಯೋಜಕರು ಕೋವಿಡ್-19 ನೆಗೆಟೀವ್ ಮತ್ತು ಲಸಿಕೆ ಪಡೆದಿರುವ ಬಗ್ಗೆ ಪ್ರಮಾಣ ಪತ್ರ ಹೊಂದಿರುವುದು ಕಡ್ಡಾಯ. ದರ್ಶನಕ್ಕಾಗಿ ಬರುವ ಭಕ್ತಾದಿಗಳು ಹಾಗೂ ಸಾರ್ವಜನಿಕರು ಕಡ್ಡಾಯವಾಗಿ ಮುಖಗವಸನ್ನು ಧರಿಸುವುದು ಮತ್ತು 6 ಅಡಿ ಅಂತರವನ್ನು ಕಾಯ್ದುಕೊಳ್ಳುವುದು. ಸಾರ್ವಜನಿಕರಿಗೆ ಹಾಗೂ ವಾಹನ ಸಂಚಾರಕ್ಕೆ ಅಡ್ಡಿಯಾಗದಂತೆ ಗಣೇಶ ಪ್ರತಿಷ್ಠಾಪನೆ ಮಾಡುವುದು. ಗಣೇಶ ಆಚರಣೆ ಕಾಲಕ್ಕೆ ಸರಕಾರ, ಜಿಲ್ಲಾಡಳಿತ, ಪೊಲೀಸ್, ಮಹಾನಗರಪಾಲಿಕೆ, ಸ್ಥಳೀಯ ಸಂಸ್ಥೆ ಹಾಗೂ ಇತರ ಇಲಾಖೆಗಳ ಸೂಚನೆ ಮತ್ತು ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸುವುದು.

90 ರಷ್ಟು ಗಣೇಶ ವಿಸರ್ಜನೆ ಕಾರ್ಯಕ್ರಮ ಮೊದಲನೆ ದಿನಕ್ಕೆ ಇರುವುದಾಗಿದೆ. ಈ ಒಂದು ಗಣೇಶ ಹಬ್ಬದ ಸಂದರ್ಭದಲ್ಲಿ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡಲು ಮಂಗಳೂರು ನಗರದಿಂದ ಒಟ್ಟು 3 ಡಿಸಿಪಿ, 5 ಎಸಿಪಿ, 24 ಪಿಐ, 62 ಪಿಎಸ್ಐ, 1222 ಎಎಸ್ಐ ಮತ್ತು ಸಿಬ್ಬಂದಿಯವರನ್ನು ಹಾಗೂ 6 ಸಿಎಆರ್ ಹಾಗೂ 5 ಕೆಎಸ್ಆರ್‌ಪಿ ತುಕಡಿಯನ್ನು ನೇಮಕ ಮಾಡಲಾಗಿದೆ.